# ಕರ್ನಾಟಕ ಲೋಕಾಯುಕ್ತ

**ನಂ.ಕಂಪ್ಲೆಂಟ್/ಉಪಲೋಕ್/ಬಿಡಿ-6245/2014/ಡಿಆರ್‌ಇ-1**

ಬಹುಮಹಡಿಗಳ ಕಟ್ಟಡ,
ಡಾ:ಅಂಬೇಡ್ಕರ್ ವೀದಿ,
ಬೆಂಗಳೂರು.
ದಿನಾಂಕ : 10/11/2017

## ಕರ್ನಾಟಕ ಲೋಕಾಯುಕ್ತ ಕಾಯಿದೆ, 1984 ರ ಕಲಂ 12(1) ರನ್ವಯ ವರದಿ

**ವಿಷಯ:** ಆರೋಗ್ಯ ನಿರೀಕ್ಷಕರು, ಮಹಾನಗರ ಪಾಲಿಕೆ, ದಾವಣಗೆರೆ ಮತ್ತು ಪರಿಸರ ಅಧಿಕಾರಿ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ದಾವಣಗೆರೆ, - ಇವರ ವಿರುದ್ಧ ಸಲ್ಲಿಸಿದ ದೂರಿನ ಸಂಬಂಧ ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 12(1) ರಡಿಯಲ್ಲಿನ ವರದಿ.

******

1) ಶ್ರೀ.ಎಸ್.ರೇವಣಸಿದ್ದಯ್ಯ ಬಿನ್ ಶಿವಮೂರ್ತಯ್ಯ ವಿ, ನಂ.972, 1ನೇ ಕ್ರಾಸ್, ಕೆ.ಟಿ.ಜೆ.ನಗರ, ದಾವಣಗೆರೆ, (ಇನ್ನು ಮುಂದೆ ದೂರುದಾರರು ಎಂದು ಕರೆಯಲ್ಪಡುತ್ತಾರೆ) ರವರು ಆರೋಗ್ಯ ನಿರೀಕ್ಷಕರು, ಮಹಾನಗರ ಪಾಲಿಕೆ, ದಾವಣಗೆರೆ, ಮತ್ತು ಪರಿಸರ ಅಧಿಕಾರಿ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ದಾವಣಗೆರೆ, (ಇನ್ನು ಮುಂದೆ ಎದುರುದಾರರು ಎಂದು ಕರೆಯಲ್ಪಡುತ್ತಾರೆ) ಇವರ ವಿರುದ್ಧ ದೂರು ಸಲ್ಲಿಸಿದ ಮೇರೆಗೆ, ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ರ ಕಲಂ 9 ರಡಿಯಲ್ಲಿ ದತ್ತವಾದ ಅಧಿಕಾರ ಚಲಾಯಿಸಿ, ವಿಚಾರಣೆಗೆ ತೆಗೆದುಕೊಂಡು ತನಿಖೆ ಮಾಡಿದೆ.

2) ದೂರುದಾರರು ತಮ್ಮ ದೂರಿನಲ್ಲಿ ದಾವಣಗೆರೆ ಮಹಾನಗರ ಪಾಲಿಕೆ 22ನೇ ವಾರ್ಡ್‌ನಲ್ಲಿ ಸೊಪ್ಪಿನ ಮಾರುಕಟ್ಟೆಯಲ್ಲಿ ಮಹಾನಗರ ಪಾಲಿಕೆಯ ಪರವಾನಗಿ ಇಲ್ಲದೆ ಗೋಮಾಂಸ ಮಾರಾಟ ಮಾಡುತ್ತಿದ್ದಾರೆ. ಸದರಿ ವಿಚಾರವಾಗಿ ಸಂಬಂಧಪಟ್ಟ ಅಧಿಕಾರಿಗಳಿಗೆ ತಿಳಿಸಿದರೂ ಸಹ ಯಾವುದೇ ಕ್ರಮವನ್ನು ಕೈಗೊಂಡಿಲ್ಲವೆಂದು ಆಪಾದಿಸಿ ದೂರನ್ನು ಸಲ್ಲಿಸಿರುತ್ತಾರೆ.

3) ದಿ.28/5/14 ರಂದು ಗೌರವಾನ್ವಿತ ಉಪಲೋಕಾಯುಕ್ತರವರ ದಾವಣಗೆರೆ ಪ್ರವಾಸದ ಸಂದರ್ಭದಲ್ಲಿ ಸೂಕ್ತ ಕ್ರಮ ಕೈಗೊಂಡು ವರದಿ ನೀಡುವಂತೆ ಜಿಲ್ಲಾಧಿಕಾರಿ, ದಾವಣಗೆರೆ ಮತ್ತು ಆಯುಕ್ತರು, ಮಹಾನಗರ ಪಾಲಿಕೆ, ದಾವಣಗೆರೆ ಇವರಿಗೆ ಆದೇಶಿಸಲಾಗಿತ್ತು.

4) ಆಯುಕ್ತರು, ಮಹಾನಗರ ಪಾಲಿಕೆ, ದಾವಣಗೆರೆ ಇವರು ಅನುಪಾಲನಾ ವರದಿಯನ್ನು ಸಲ್ಲಿಸಿದ್ದು, ವರದಿಯಲ್ಲಿ ಕೆ.ಟಿ.ಜೆ.ನಗರದಲ್ಲಿ ಅನಧಿಕೃತವಾಗಿದ್ದ ಮಾಂಸದ ಅಂಗಡಿಗಳನ್ನು ಸಂಪೂರ್ಣವಾಗಿ ತೆರವುಗೊಳಿಸಲಾಗಿರುತ್ತದೆ. ನಗರದಲ್ಲಿರುವ ಇತರೆ ಮಾಂಸದ ಉದ್ದಿಮೆಗಳಿಗೆ ಸ್ವಚ್ಛತೆ ಬಗ್ಗೆ ಹಾಗೂ ನೈರ್ಮಲ್ಯತೆ ಕಾಪಾಡಲು ಕುರಿತು ಕಟ್ಟುನಿಟ್ಟಾಗಿ ಸೂಚನೆ ನೀಡಲಾಗಿದೆ

ಹಾಗೂ ಪ್ರತಿನಿತ್ಯ ಸಂಬಂಧಿಸಿದ ಆರೋಗ್ಯ ನಿರೀಕ್ಷಕರು ಪರಿಶೀಲನೆ ಮಾಡುತ್ತಿದ್ದಾರೆ. ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಖಾಯಂ ಆಗಿ ಆಧುನಿಕ ಕಸಾಯಿ ಖಾನೆ ನಿರ್ಮಾಣ ಮಾಡಲು ಮಾನ್ಯ ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ಇವರ ಆದೇಶದ ಮೇರೆಗೆ ಕೆ.ಐ.ಪಿ.ಡಿ.ಸಿ ಸಂಸ್ಥೆ, ಬೆಂಗಳೂರು ಇವರು ದಿ.6/8/14 ಮತ್ತು ದಿ.7/8/14 ರಂದು ಕಸಾಯಿ ಖಾನೆ ನಿರ್ಮಿಸುವ ಸ್ಥಳಕ್ಕೆ ಭೇಟಿ ನೀಡಿ ವಿಸ್ತೃತ ಯೋಜನೆ ತಯಾರಿಸಲು ಅವಶ್ಯವಿರುವ ಎಲ್ಲಾ ಮಾಹಿತಿಯನ್ನು ಪಡೆದಿರುತ್ತಾರೆ ಮತ್ತು 2 ತಿಂಗಳೊಳಗಾಗಿ ಕಸಾಯಿ ಖಾನೆ ನಿರ್ಮಿಸಲು ಅವಶ್ಯ ಕ್ರಮ ಕೈಗೊಳ್ಳುವುದಾಗಿ ತಿಳಿಸಿರುತ್ತಾರೆ. ಕಸಾಯಿಖಾನೆ ನಿರ್ಮಾಣಕ್ಕಾಗಿ ಪೌರಾಡಳಿತ ನಿರ್ದೇಶನಾಲಯದಿಂದ ರೂ.50 ಲಕ್ಷ ಬಿಡುಗಡೆಯಾಗಿರುತ್ತದೆ ಎಂದು ಹೇಳಿರುತ್ತಾರೆ.

5) ಆಯುಕ್ತರ ವರದಿಯ ಮೇಲೆ ದೂರುದಾರರು ಪ್ರತ್ಯುತ್ತರವನ್ನು ಸಲ್ಲಿಸಿದ್ದು, ಪ್ರತ್ಯುತ್ತರದಲ್ಲಿ ಗೋಮಾಂಸದ ಅಂಗಡಿಗಳನ್ನು ತಾತ್ಕಾಲಿಕವಾಗಿ ಬಂದ್ ಮಾಡಿಸಿರುತ್ತಾರೆ. ನಗರದ ಇತರೆ ಮಾಂಸದ ಉದ್ದಿಮೆಗಳಿಗೆ ಸ್ವಚ್ಛತೆ ಬಗ್ಗೆ ಹಾಗೂ ನೈರ್ಮಲ್ಯತೆ ಕಾಪಾಡಲು ಕುರಿತು ನೀಡಿರುವ ಸೂಚನೆ ಮೇರೆಗೆ ಆರೋಗ್ಯ ನಿರೀಕ್ಷಕರು ಯಾವುದೇ ಪರಿಶೀಲನೆಯನ್ನು ಮಾಡಿರುವುದಿಲ್ಲ. 2 ತಿಂಗಳೊಳಗೆ ಕಸಾಯಿಖಾನೆ ನಿರ್ಮಿಸಲು ಕ್ರಮ ಕೈಗೊಳ್ಳುವುದಾಗಿ ತಿಳಿಸಿರುವುದು ಸುಳ್ಳಿನಿಂದ ಕೂಡಿರುತ್ತದೆಯೆಂದು ಹೇಳಿರುತ್ತಾರೆ.

6) ಆಯುಕ್ತರು, ಮಹಾನಗರ ಪಾಲಿಕೆ ಇವರ ವರದಿಯನ್ನು ಪರಿಶೀಲಿಸಿದಾಗ, ಕಸಾಯಿಖಾನೆ ನಿರ್ಮಿಸುವ ಸ್ಥಳಕ್ಕೆ ಭೇಟಿ ನೀಡಿ ವಿಸ್ತೃತ ಯೋಜನೆ ತಯಾರಿಸಲು ಮಾಹಿತಿಯನ್ನು ಪಡೆಯಲಾಗಿದೆ ಮತ್ತು ಕಸಾಯಿಖಾನೆ ನಿರ್ಮಾಣಕ್ಕಾಗಿ ಪೌರಾಡಳಿತ ನಿರ್ದೇಶನಾಲಯದಿಂದ ಈಗಾಗಲೇ ರೂ.50 ಲಕ್ಷ ಬಿಡುಗಡೆಯಾಗಿರುತ್ತದೆಯೆಂದು ಹೇಳಿರುವುದು ಕಂಡುಬಂದ ಕಾರಣ, ಕಸಾಯಿಖಾನೆ ನಿರ್ಮಾಣ ಯಾವ ಹಂತದಲ್ಲಿದೆಯೆಂಬ ಬಗ್ಗೆ ವರದಿ ನೀಡುವಂತೆ ಆಯುಕ್ತರು, ಮಹಾನಗರ ಪಾಲಿಕೆ, ದಾವಣಗೆರೆ ಇವರಿಗೆ ಆದೇಶಿಸಲಾಗಿತ್ತು.

7) ಆಯುಕ್ತರು, ಮಹಾನಗರ ಪಾಲಿಕೆ, ದಾವಣಗೆರೆ ಇವರು ತಮ್ಮ ಪತ್ರದಲ್ಲಿ ದಾವಣಗೆರೆ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕಸಾಯಿ ಖಾನೆ ನಿರ್ಮಿಸುವ ಸಂಬಂಧ ಮಾನ್ಯ ಜಿಲ್ಲಾಧಿಕಾರಿಗಳು, ದಾವಣಗೆರೆ ಇವರಿಗೆ ದಾವಣಗೆರೆ ನಗರ ವ್ಯಾಪ್ತಿಯಲ್ಲಿ ಆಧುನಿಕ ಕಸಾಯಿ ಖಾನೆ ನಿರ್ಮಿಸಲು 5 ಎಕರೆ ಸರ್ಕಾರಿ ಜಾಗ ಲಭ್ಯವಿದ್ದರೆ ಹಸ್ತಾಂತರಿಸಲು ವಿನಂತಿಸಲಾಗಿತ್ತು. ಸರ್ಕಾರಿ ಜಾಗ ಲಭ್ಯವಿಲ್ಲದ ಪ್ರಯುಕ್ತ ಖಾಸಗಿ ಜಮೀನನ್ನು ಖರೀದಿಸಲು ಪ್ರಸ್ತಾವನೆಯನ್ನು ಕೌನ್ಸಿಲ್ ಸಭೆಗೆ ಮಂಡಿಸಲಾಗಿತ್ತು. ದಿ.22/2/17 ರಂದು ಕೌನ್ಸಿಲ್ ಸಭೆಯಲ್ಲಿ ಕಸಾಯಿಖಾನೆ ನಿರ್ಮಾಣ ಮಾಡಲು ಸೂಕ್ತ ಜಮೀನನ್ನು ಗುರುತಿಸಲು ತೀರ್ಮಾನಿಸಲಾಗಿರುತ್ತದೆ. ಈ ಬಗ್ಗೆ ಕಚೇರಿಯ ಸಿಬ್ಬಂದಿಗೆ ನಿರ್ದೇಶನ ನೀಡಿ, ಸೂಕ್ತ ಜಮೀನು ಲಭ್ಯತೆಯ ಬಗ್ಗೆ ಕ್ರಮ ವಹಿಸಲು ನಿರ್ದೇಶಿಸಲಾಗಿದೆ. ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲು ದಿ.22/2/17 ರ ಸಭೆಯಲ್ಲಿ ತೀರ್ಮಾನಿಸಲಾಗಿದೆ ಎಂದು ವರದಿ ನೀಡಿರುತ್ತಾರೆ.

8) ದಿ.15/4/2017 ರಂದು ಗೌರವಾನ್ವಿತ ಉಪಲೋಕಾಯುಕ್ತರು ದಾವಣಗೆರೆ ಜಿಲ್ಲೆಗೆ ಭೇಟಿ ನೀಡಿದ ಸಂದರ್ಭದಲ್ಲಿ ಕಸಾಯಿ ಖಾನೆಯ ಬಗ್ಗೆ ಸಾರ್ವಜನಿಕರು ಗೌರವಾನ್ವಿತ ಉಪಲೋಕಾಯುಕ್ತರಿಗೆ ಮೌಖಿಕವಾಗಿ ದೂರನ್ನು ನೀಡಿದ್ದು, ವಿಚಾರಿಸಲಾಗಿ ದಾವಣಗೆರೆಯಲ್ಲಿ ಎಲ್ಲಾ ಕಸಾಯಿ ಖಾನೆಗಳು ಅನಧಿಕೃತವಾಗಿ ನಡೆಯುತ್ತಿವೆ. ತೆರೆದ ಪ್ರದೇಶದಲ್ಲಿ ಪ್ರಾಣಿಗಳನ್ನು ಕೊಲ್ಲುವುದು ನಡೆಯುತ್ತಿದೆ ಮತ್ತು ಸದರಿ ಪ್ರಾಣಿಗಳ ರಕ್ತವು ತೆರೆದ ಪ್ರದೇಶದಲ್ಲೇ ಹರಿದು ಹೋಗುವುದರಿಂದ, ಸದರಿ ಪ್ರದೇಶದಲ್ಲಿ ಜೀವನ ನಡೆಸಲು ಕಷ್ಟಕರವಾಗಿರುತ್ತದೆ. ಹಲವಾರು ಅನಧಿಕೃತ ಮಾಂಸದ ಅಂಗಡಿಗಳು ತಲೆ ಎತ್ತಿದ್ದು, ಅವರು ತೆರೆದ ಪ್ರದೇಶದಲ್ಲೇ ಪ್ರಾಣಿಗಳ ಹತ್ಯೆಯನ್ನು ಮಾಡಿ ಮಾಂಸ ಮಾರಾಟವನ್ನು ಯಾವುದೇ ಅಡೆತಡೆಯಿಲ್ಲದೆ ಮಾಡಿಕೊಂಡಿರುತ್ತಾರೆಂದು ಸಾರ್ವಜನಿಕರು ಅಹವಾಲು ನೀಡಿರುತ್ತಾರೆ. ಸಾರ್ವಜನಿಕರ ವಿಚಾರಣೆಯಿಂದ ದಾವಣಗೆರೆಯಲ್ಲಿ ಎಲ್ಲಾ ಕಸಾಯಿ ಖಾನೆ ಮತ್ತು ಮಾಂಸದ ಅಂಗಡಿಗಳು ಅನಧಿಕೃತವಾಗಿ ನಡೆಯುತ್ತಿರುವುದು ಮೇಲ್ನೋಟಕ್ಕೆ ಕಂಡುಬಂದಿರುತ್ತದೆ. ಸದರಿ ಅನಧಿಕೃತ ಮಾಂಸದ ಅಂಗಡಿ ಮತ್ತು ಕಸಾಯಿ ಖಾನೆಯ ಬಗ್ಗೆ ಮಾಲೀನ್ಯ ನಿಯಂತ್ರಣ ಮಂಡಳಿಯವರು ಯಾವುದೇ ಕ್ರಮವನ್ನು ಕೈಗೊಳ್ಳದಿರುವುದು ಕಂಡುಬಂದಿರುತ್ತದೆ. ಮುಂದುವರೆದು, ಯಾವುದೇ ತಾತ್ಕಾಲಿಕ ಕಸಾಯಿ ಖಾನೆಯನ್ನು ನಿರ್ಮಿಸಿರುವುದಾಗಲೀ ಅಥವಾ ವೈಜ್ಞಾನಿಕ ರೀತಿಯಲ್ಲಿ ಕಸಾಯಿ ಖಾನೆಯನ್ನು ನಿರ್ಮಿಸುವ ಬಗ್ಗೆ ಮಹಾನಗರ ಪಾಲಿಕೆಯವರು ಕ್ರಮ ಕೈಗೊಂಡರೂ ಸಹ ಆ ಬಗ್ಗೆ ಮಾಲೀನ್ಯ ನಿಯಂತ್ರಣ ಮಂಡಳಿಯವರು ಯಾವುದೇ ಕ್ರಮವನ್ನು ಕೈಗೊಳ್ಳದಿರುವುದು ಮೇಲ್ನೋಟಕ್ಕೆ ಕಂಡುಬಂದಿರುತ್ತದೆ.

9) ಆದ್ದರಿಂದ, ಈ ಪ್ರಕರಣದಲ್ಲಿ ಪ್ರಾದೇಶಿಕ ಅಧಿಕಾರಿ, ಕರ್ನಾಟಕ ರಾಜ್ಯ ಮಾಲೀನ್ಯ ನಿಯಂತ್ರಣ ಮಂಡಳಿ, ದಾವಣಗೆರೆ ವಿಭಾಗ ಇವರನ್ನು ಎದುರುದಾರರನ್ನಾಗಿ ಮಾಡಿ ಅವರಿಂದ ಆಕ್ಷೇಪಣೆ ಹಾಗೂ ಅನುಪಾಲನಾ ವರದಿಯನ್ನು ತರಿಸಲಾಗಿತ್ತು.

10) ಸದರಿಯವರು ತನ್ನ ವರದಿಯಲ್ಲಿ ದಿ.17/4/17 ರಂದು ಪರಿವೀಕ್ಷಣೆ ನಡೆಸಲಾಗಿ ನಗರದ ವಸಂತ ಚಿತ್ರಮಂದಿರ ರಸ್ತೆ, ನರಸರಾಜ ಪೇಟೆಗಳಲ್ಲಿ ಒಂದೆಡರ ಮಟನ್ ಸ್ಟಾಲ್‌ಗಳು ಇರುತ್ತವೆ ಮತ್ತು ಬಾಷಾನಗರ ಮುಖ್ಯರಸ್ತೆ, ಹಳೆ ಬೇತೂರು ರಸ್ತೆ ಮತ್ತು ಕೆ.ಟಿ.ಜೆ. ನಗರಗಳಲ್ಲಿ ಚದುರಿದಂತೆ ಮತ್ತು ಗುಂಪಿನಲ್ಲಿ ಮಟನ್ ಸ್ಟಾಲ್‌ಗಳು ಕಾರ್ಯನಿರ್ವಹಿಸುತ್ತಿರುತ್ತವೆ. ಈ ಎಲ್ಲಾ ಮಟನ್ ಸ್ಟಾಲ್‌ಗಳು ದಿನಾಲೂ 2 ರಿಂದ 3 ಪ್ರಾಣಿಗಳನ್ನು ವಧಿಸುತ್ತಿರುತ್ತಾರೆ ಮತ್ತು ಯಾವುದೇ ಮಟನ್ ಸ್ಟಾಲ್‌ಗಳಲ್ಲೂ ಸಹ 10 ಕ್ಕಿಂತ ಹೆಚ್ಚು ಪ್ರಾಣಿಗಳನ್ನು ವಧೆ ಮಾಡುವುದು ಕಂಡುಬಂದಿರುವುದಿಲ್ಲ. ನಗರದ ವಸಂತ ಚಿತ್ರಮಂದಿರದ ರಸ್ತೆ, ನರಸರಾಜ ಪೇಟೆ ಮತ್ತು ಕೆ.ಟಿ.ಜೆ.ನಗರಗಳಲ್ಲಿ ಮಟನ್ ಸ್ಟಾಲ್‌ಗಳು ಮಹಾನಗರ ಪಾಲಿಕೆಯ ಬಾಡಿಗೆ ಕಟ್ಟಡಗಳಲ್ಲಿರುತ್ತವೆ. ಸದರಿ ಮಟನ್ ಸ್ಟಾಲ್‌ಗಳು ವಸತಿ ಪ್ರದೇಶ ಮತ್ತು ವಾಣಿಜ್ಯ ಪ್ರದೇಶಗಳನ್ನೊಳಗೊಂಡ ಪ್ರದೇಶದಲ್ಲಿರುತ್ತವೆ. ಸದರಿ ಮಟನ್ ಸ್ಟಾಲ್‌ಗಳ ಹತ್ತಿರ ಸೂಕ್ತವಾದ ಸಂಸ್ಕರಣಾ ಘಟಕಗಳನ್ನು ನಿರ್ಮಿಸಲು ಸ್ಥಳಾವಕಾಶ ಇರುವುದಿಲ್ಲ. ಮೇಲ್ಕಂಡ ಅಂಶಗಳನ್ನು ಗಮನಿಸಲಾಗಿ, ಪಾಲಿಕೆಯು

ಇಂತಹ ಪ್ರಾಣಿವಧೆ ಸ್ಥಳಗಳಿಂದ ಸುತ್ತಮುತ್ತಲಿನ ನಾಗರೀಕರ ಹಾಗೂ ಪರಿಸರದ ಮೇಲೆ ಪರಿಣಾಮ ಬೀರುವುದನ್ನು ತಡೆಯಲು ಯಾವುದೇ ಕ್ರಮ ಕೈಗೊಂಡಿರುವುದಿಲ್ಲ. ಸಾರ್ವಜನಿಕರ ಆರೋಗ್ಯದ ಹಿತದೃಷ್ಟಿಯಿಂದ ನಗರದಲ್ಲಿರುವ ಪ್ರಾಣಿವಧೆ ಅಂಗಡಿಗಳನ್ನು ಸ್ಥಳಾಂತಿಸಲು ಮತ್ತು ವೈಜ್ಞಾನಿಕ ರೀತ್ಯ ಕಸಾಯಿ ಖಾನೆ ನಿರ್ಮಿಸಲು ಕ್ರಮ ಕೈಗೊಳ್ಳುವಂತೆ ತಿಳಿಸಿ ನೋಟೀಸು ಜಾರಿ ಮಾಡಲಾಗಿರುತ್ತದೆ ಮತ್ತು ಮಹಾನಗರ ಪಾಲಿಕೆಯ ಮೇಲೆ ಜಲ ಕಾಯಿದೆಯಡಿಯಲ್ಲಿ ಮೊಕದ್ದಮೆ ಹೂಡಲಾಗಿರುತ್ತದೆಯೆಂದು ಹೇಳಿರುತ್ತಾರೆ.

11) ಈ ಪ್ರಕರಣದ ದೂರುದಾರರು ಕಂಪ್ಲೆಂಟ್/ಉಪಲೋಕ್/ಬಿಡಿ-7124/2014 ಪ್ರಕರಣದಲ್ಲಿ ಎದುರುದಾರರ ವಿರುದ್ಧ ದೂರನ್ನು ಸಲ್ಲಿಸಿದ್ದು, ಸದರಿ ಪ್ರಕರಣದಲ್ಲಿ ಎದುರುದಾರರ ಅಧಿಕಾರಾವಧಿಯಲ್ಲಿ ಸರ್ಕಾರದ ಸುತ್ತೋಲೆಯಂತೆ ಕಸಾಯಿ ಖಾನೆ ನಡೆಸಲು ಎದುರುದಾರರು ಯಾವುದೇ ಕ್ರಮವನ್ನು ಕೈಗೊಳ್ಳದಿರುವ ಬಗ್ಗೆ ಮತ್ತು ಅನಧಿಕೃತ ಕಸಾಯಿ ಖಾನೆಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳದಿರುವ ಬಗ್ಗೆ ಎದುರುದಾರರ ವಿರುದ್ಧ ಶಿಸ್ತು ಕ್ರಮಕ್ಕಾಗಿ ಶಿಫಾರಸ್ಸು ಮಾಡಿ ಕರ್ನಾಟಕ ಲೋಕಾಯುಕ್ತ ಕಾಯಿದೆ ಕಲಂ 12(3) ರನ್ವಯ ವರದಿಯನ್ನು ಸಲ್ಲಿಸಲಾಗಿರುತ್ತದೆ. ಈ ಪ್ರಕರಣದಲ್ಲಿ ಕೂಡ ಅದೇ ಆಪಾದನೆಯನ್ನು ಮಾಡಲಾಗಿರುತ್ತದೆ. ಆದ್ದರಿಂದ, ಎದುರುದಾರರ ವಿರುದ್ಧ ಈಗಾಗಲೇ ಸರ್ಕಾರಕ್ಕೆ ವರದಿ ಸಲ್ಲಿಸಲಾಗಿರುತ್ತದೆ.

12) 2ನೇ ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ ಕಸಾಯಿಖಾನೆ ನಿರ್ಮಿಸುವುದಕ್ಕಾಗಿ ಗುರ್ತಿಸಿರುವ ಜಾಗವು ಮಾರ್ಗಸೂಚಿಗನುಗುಣವಾಗಿ ಇಲ್ಲದಿರುವುದರಿಂದ, ಮತ್ತು ಹೊಸ ಜಾಗದ ಲಭ್ಯತೆ ಇಲ್ಲದೆ ಇರುವುದರಿಂದ, ವೈಜ್ಞಾನಿಕ ಕಸಾಯಿಖಾನೆಯನ್ನು ನಿರ್ಮಿಸಲು ಸಾಧ್ಯವಾಗಿರುವುದಿಲ್ಲ ಎಂದು ತಿಳಿಸಿರುವುದು ಕಂಡುಬರುತ್ತದೆ.

13) ಮೇಲ್ಕಂಡ ಹಿನ್ನೆಲೆಯಲ್ಲಿ ಕರ್ನಾಟಕ ಲೋಕಾಯುಕ್ತ ಕಾಯ್ದೆ, 1984ರ ಕಲಂ, 12(1) ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಶೀಘ್ರವಾಗಿ ಕಸಾಯಿ ಖಾನೆಯನ್ನು ನಿರ್ಮಿಸಲು ಕ್ರಮವನ್ನು ಕೈಗೊಳ್ಳುವಂತೆ ಸಂಬಂಧಪಟ್ಟವರಿಗೆ ನಿರ್ದೇಶನ ನೀಡಲು ಈ ಮೂಲಕ ಶಿಫಾರಸ್ಸು ಮಾಡಲಾಗಿರುತ್ತದೆ. ತದನಂತರ ಸಕ್ಷಮ ಪ್ರಾಧಿಕಾರವು ಈ ಸಂಸ್ಥೆಗೆ ಅಲ್ಲಿಂದ **ಒಂದು ತಿಂಗಳೊಳಗೆ** ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 12(2) ರಡಿಯಲ್ಲಿ ಕೈಗೊಳ್ಳಲಾದ ಕ್ರಮದ ಬಗ್ಗೆ ವರದಿ ಸಲ್ಲಿಸುವುದು

ಸಂಬಂಧಪಟ್ಟ ದಾಖಲೆಗಳನ್ನು ಲಗತ್ತಿಸಿದೆ.

10/11/17.

**(ನ್ಯಾಯಮೂರ್ತಿ ಸುಭಾಷ್ ಬಿ. ಆಡಿ)**
**ಉಪಲೋಕಾಯುಕ್ತರು-2,**
**ಕರ್ನಾಟಕ ರಾಜ್ಯ, ಬೆಂಗಳೂರು.**